# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಗುಳೇದಗುಡ್ಡ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶದ ಮಹಾ ಯೋಜನೆಗೆ ಸರ್ಕಾರದ ಅಂತಿಮ ಅನುಮೋದನೆಯನ್ನು ನೀಡುವ ಬಗ್ಗೆ.

ಓದಲಾಗಿದೆ: 1) ಸರ್ಕಾರದ ಆದೇಶ ಸಂಖ್ಯೆ. ನಅಇ 195 ಬೆಮಪ್ರಾ 2003, ದಿನಾಂಕ: 4.8.03.

2) ಮುಖ್ಯಾಧಿಕಾರಿ, ಪುರಸಭೆ ಯೋಜನಾ ಪ್ರಾಧಿಕಾರ, ಗುಳೇದಗುಡ್ಡ ಇವರ ಪತ್ರ ಸಂಖ್ಯೆ. ನಯೋಪ್ರಾಗು/ ಮಹಾಯೋಜನೆ/2008-09/445, ದಿನಾಂಕ: 1.12.08.

3) ನಿರ್ದೇಶಕರು, ನಗರ ಯೋಜನಾ ಇಲಾಖೆ ಇವರ ಏಕ ಕಡತ ಸಂಖ್ಯೆ. ನಯೋ(7):ಉನಿI/ಗುಳೇದಗುಡ್ಡ/ಮ.ಯೋ/ಅಂತಿಮ/ 2009 ರಲ್ಲಿ ದಿನಾಂಕ: 3.2.09 ರಂದು ನೀಡಿರುವ ಅಭಿಪ್ರಾಯ.

216
9.3.09

ಪ್ರಸ್ತಾವನೆ:

ಮೇಲೆ ಓದಲಾದ (1) ರ ಸರ್ಕಾರದ ಆದೇಶದಲ್ಲಿ, ಗುಳೇದಗುಡ್ಡ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶದ ಮಹಾ ಯೋಜನೆಗೆ ತಾತ್ಕಾಲಿಕ ಅನುಮೋದನೆ ನೀಡಿ ಆದೇಶಿಸಿದೆ.

ಮೇಲೆ ಓದಲಾದ (2) ರ ಪತ್ರದಲ್ಲಿ ಗುಳೇದಗುಡ್ಡ ಪುರಸಭೆ ಯೋಜನಾ ಪ್ರಾಧಿಕಾರವು ಗುಳೇದಗುಡ್ಡ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶಕ್ಕೆ ತಯಾರಿಸಿರುವ ಮಹಾ ಯೋಜನೆಯ ಕುರಿತು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 13(1) ರನ್ವಯ ಅಗತ್ಯ ಕ್ರಮ ಜರುಗಿಸಿ, ಮಹಾ ಯೋಜನೆಯ ನಕ್ಷೆಗಳನ್ನು ಹಾಗೂ ವರದಿಯನ್ನು ತಯಾರಿಸಿ ಸರ್ಕಾರದ ಅಂತಿಮ ಅನುಮೋದನೆಗೆ ನಗರ ಯೋಜನಾ ಇಲಾಖೆಯ ಮುಖಾಂತರ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ (3) ರ ನಗರ ಯೋಜನಾ ನಿರ್ದೇಶಕರ ಏಕ ಕಡತದಲ್ಲಿ ಗುಳೇದಗುಡ್ಡ ಪಟ್ಟಣದ ಜನಸಂಖ್ಯೆಯು 2021 ರಲ್ಲಿ 52,000 ಗಳಷ್ಟು ಬೆಳವಣಿಗೆಯಾಗುವುದಾಗಿ ಅಂದಾಜಿಸಿ, ಮಹಾ ಯೋಜನೆಯನ್ನು ತಯಾರಿಸಲಾಗಿದೆ. ಗುಳೇದಗುಡ್ಡ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶದ 575 ಹೆಕ್ಟೇರ್ ಪ್ರದೇಶದಲ್ಲಿ 473 ಹೆಕ್ಟೇರ್ ಪ್ರದೇಶವನ್ನು ನಗರೀಕರಣ ಎಲ್ಲೆಯೆಂದು ಪ್ರಸ್ತಾಪಿಸಿ ಯೋಜನೆಯನ್ನು ರೂಪಿಸಲಾಗಿದೆ. ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 12 ರಲ್ಲಿನ ಅಂಶಗಳನ್ನು ಪರಿಗಣಿಸಿ, ಪಟ್ಟಣದ ಮುಂದಿನ ಯೋಜಿತ ಬೆಳವಣಿಗೆಗಳಿಗಾಗಿ ಪ್ರಸ್ತಾಪಿಸಿರುವ ಒಟ್ಟು 473 ಹೆಕ್ಟೇರ್ ಪ್ರದೇಶದಲ್ಲಿ ವಸತಿಗಾಗಿ 241.95 ಹೆಕ್ಟೇರ್ (ಶೇ.51.15), ವಾಣಿಜ್ಯಕ್ಕಾಗಿ 15.14 ಹೆಕ್ಟೇರ್ (ಶೇ.3.20), ಕೈಗಾರಿಕೆಗಾಗಿ 19.64 ಹೆಕ್ಟೇರ್ (ಶೇ.4.15), ಸಾರ್ವಜನಿಕ/ ಅರೆ ಸಾರ್ವಜನಿಕ ಉಪಯೋಗಕ್ಕೆ 29.78 ಹೆಕ್ಟೇರ್ (ಶೇ.6.30), ಉದ್ಯಾನವನ/ ಬಯಲು ಜಾಗೆಗಳಿಗೆ 37.46 ಹೆಕ್ಟೇರ್ (ಶೇ.7.92), ನಾಗರೀಕ ಸೌಲಭ್ಯಕ್ಕಾಗಿ 5.53 ಹೆಕ್ಟೇರ್ (ಶೇ.1.17) ಹಾಗೂ ಸಾರಿಗೆ ಮತ್ತು ಸಂಪರ್ಕ ವಲಯಕ್ಕೆ 123.50 ಹೆಕ್ಟೇರ್ (ಶೇ.26.11) ಪ್ರದೇಶವನ್ನು ನಿಗಧಿಪಡಿಸಲಾಗಿದೆ. ಮಹಾ ಯೋಜನೆಯನ್ನು ಅನುಷ್ಠಾನಕ್ಕೆ

ತರಲು ಅಗತ್ಯವಿರುವ ವಲಯ ನಿಯಮಾವಳಿಗಳನ್ನು ರೂಪಿಸಲಾಗಿದ್ದು, ಸದರಿ ಮಹಾ ಯೋಜನೆಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಪ್ರಕರಣ 13(3) ರನ್ವಯ ಅಂತಿಮ ಅನುಮೋದನೆ ನೀಡಲು ಶಿಫಾರಸ್ಸು ಮಾಡಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ. ಪ್ರಸ್ತಾವನೆಯನ್ನು ಪರಿಶೀಲಿಸಿದ ನಂತರ ಈ ಕೆಳಕಂಡ ಆದೇಶವನ್ನು ಹೊರಡಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ. ನಅಇ 84 ಬೆಮಪ್ರಾ 2009, ಬೆಂಗಳೂರು, ದಿನಾಂಕ: 27.2.2009.**

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಗುಳೇದಗುಡ್ಡ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶಕ್ಕೆ ರೂಪಿಸಿರುವ ಮಹಾ ಯೋಜನೆಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 13(3) ರನ್ವಯ ಸರ್ಕಾರದ ಅಂತಿಮ ಅನುಮೋದನೆಯನ್ನು ನೀಡಲಾಗಿದೆ.

ಮಹಾ ಯೋಜನೆಗೆ ಅಂತಿಮ ಅನುಮೋದನೆ ನೀಡಿದ ಗುರುತಾಗಿ ವರದಿ ಮತ್ತು ನಕ್ಷೆಗಳ ಮೇಲೆ ಸರ್ಕಾರದ ಮುದ್ರೆಯನ್ನು ಹಾಕಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಸಿ.ಟಿ.ನಾರಾಯಣಸ್ವಾಮಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ.

ಇವರಿಗೆ:

೧. ಜಿಲ್ಲಾಧಿಕಾರಿಗಳು, ಬಾಗಲಕೋಟೆ ಜಿಲ್ಲೆ, ಬಾಗಲಕೋಟೆ.
೨. ನಿರ್ದೇಶಕರು, ನಗರ ಯೋಜನಾ ಇಲಾಖೆ, ಬೆಂಗಳೂರು.
೩. ಮುಖ್ಯಾಧಿಕಾರಿ, ಪುರಸಭೆ ಯೋಜನಾ ಪ್ರಾಧಿಕಾರ, ಗುಳೇದಗುಡ್ಡ.
೪. ಸಹಾಯಕ ನಿರ್ದೇಶಕರು, ನಗರ ಯೋಜನಾ ಇಲಾಖೆ, ಬಾಗಲಕೋಟೆ.
೫. ಕರ್ನಾಟಕ ರಾಜ್ಯಪತ್ರ.
೬. ಶಾಖಾ ರಕ್ಷಾ ಕಡತ: ಹೆಚ್ಚುವರಿ ಪ್ರತಿಗಳು.